**All India Radio: Bangalore**
**National Bulletin In Kannada**
**19.04.2025 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**19.04.2025 1.10 p.m.**
**<><><><>**

ಮುಖ್ಯಾಂಶಗಳು

1. ಭಾರತದ ಮೊದಲ ಉಪಗ್ರಹ ಆರ್ಯಭಟ ಉಡಾವಣೆಯಾಗಿ ಇಂದಿಗೆ ೫೦ ವರ್ಷ; ಬೆಂಗಳೂರಿನ ನೆಹರು ತಾರಾಲಯದಲ್ಲಿ ವಿಶೇಷ ಕಾರ್ಯಕ್ರಮ
2. ಜಂಟಿ ಪ್ರವೇಶ ಪರೀಕ್ಷೆ - ಜೆಇಇ ಮೇನ್ಸ್ ಫಲಿತಾಂಶ ಪ್ರಕಟ; ೨೪ ವಿದ್ಯಾರ್ಥಿಗಳಿಗೆ ನೂರಕ್ಕೆ ನೂರು ಅಂಕ
3. ಕಳೆದ ಹಣಕಾಸು ವರ್ಷದಲ್ಲಿ ೩೦ ಶತಕೋಟಿ ಡಾಲರ್ ದಾಟಿದ ಭಾರತದ ಔಷಧ ರಫ್ತು
4. ೧೮ ವರ್ಷದೊಳಗಿನವರ ಏಷ್ಯನ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್; ಪುರುಷರ ಜಾವೆಲಿನ್ ಎಸೆತ ಸ್ಪರ್ಧೆಯಲ್ಲಿ ಭಾರತದ ಹಿಮಾಂಶು ಜಾಕರ್‌ಗೆ ಚಿನ್ನ
5. ಐಪಿಎಲ್-ಟಿ೨೦ ಕ್ರಿಕೆಟ್; ಗುಜರಾತ್ ಟೈಟಾನ್ಸ್ - ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ರಾಜಸ್ಥಾನ ರಾಯಲ್ಸ್ - ಲಕ್ನೋ ಸೂಪರ್ ಜೈಂಟ್ಸ್ ತಂಡಗಳ ಹಣಾಹಣಿ

<><><><>

ಭಾರತದ ಮೊದಲ ಉಪಗ್ರಹ ಆರ್ಯಭಟ ಉಡಾವಣೆ ಮಾಡಿ ಇಂದಿಗೆ ೫೦ ವರ್ಷಗಳು ಸಂದಿವೆ. ೧೯೭೫ ರಲ್ಲಿ ಈ ದಿನದಂದು ಉಡಾವಣೆ ಮಾಡಲಾದ ಈ ಉಪಗ್ರಹಕ್ಕೆ ಪ್ರಾಚೀನ ಭಾರತೀಯ ಗಣಿತಜ್ಞ ಮತ್ತು ಖಗೋಳಶಾಸ್ತ್ರಜ್ಞ ಆರ್ಯಭಟ ಅವರ ಹೆಸರನ್ನು ಇಡಲಾಗಿತ್ತು. ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಅಭಿವೃದ್ಧಿಪಡಿಸಿದ ಈ ಉಪಗ್ರಹವನ್ನು ರಷ್ಯಾ ಸಹಾಯದೊಂದಿಗೆ ಕಪುಸ್ಟಿನ್‌ಯಾರ್‌ನಿಂದ ಉಡಾವಣೆ ಮಾಡಲಾಯಿತು. ಸೌರ ಭೌತಶಾಸ್ತ್ರ, ವಾಯುವಿಜ್ಞಾನ ಮತ್ತು ಎಕ್ಸ್-ರೇ ಖಗೋಳಶಾಸ್ತ್ರ ಸೇರಿದಂತೆ ಇತರೆ ಪ್ರದೇಶಗಳನ್ನು ಅನ್ವೇಷಿಸುವುದು ಈ ಉಪಗ್ರಹದ ಉದ್ದೇಶವಾಗಿತ್ತು. ಕಕ್ಷೆಯಲ್ಲಿ ಐದು ದಿನಗಳನ್ನು ಕಳೆದ ನಂತರ, ಆರ್ಯಭಟ ವಿದ್ಯುತ್ ವೈಫಲ್ಯವನ್ನು ಅನುಭವಿಸಿತು, ಇದರಿಂದಾಗಿ ಎಲ್ಲಾ ಪ್ರಯೋಗಗಳನ್ನು ನಿಲ್ಲಿಸಲಾಯಿತು. ಇದರ ಹೊರತಾಗಿಯೂ, ಅಮೂಲ್ಯವಾದ ದತ್ತಾಂಶವನ್ನು ಸಂಗ್ರಹಿಸಲಾಯಿತು ಮತ್ತು ವಿಜ್ಞಾನಿಗಳಿಗೆ ಉಪಗ್ರಹ ಅಭಿವೃದ್ಧಿಯಲ್ಲಿ ನಿರ್ಣಾಯಕ ಅನುಭವವನ್ನು ಇದು ನೀಡಿತು. ವೈಫಲ್ಯದ ನಂತರ ಉಪಗ್ರಹವು ಇನ್ನೂ ಕೆಲವು ದಿನಗಳವರೆಗೆ ಮಾಹಿತಿಯನ್ನು ರವಾನಿಸುವುದನ್ನು ಮುಂದುವರೆಸಿತು. ಆರ್ಯಭಟವು ಭಾರತದ ಬಾಹ್ಯಾಕಾಶ ಪರಿಶೋಧನೆಗೆ ಅಡಿಪಾಯವಾಯಿತು ಮತ್ತು ದೇಶದ ಭವಿಷ್ಯದ ಬಾಹ್ಯಾಕಾಶ ಯಾನಗಳಿಗೆ ಪ್ರಮುಖ ಮೈಲಿಗಲ್ಲಾಯಿತು. ಅದರ ಯಶಸ್ವಿ ಉಡಾವಣೆಯೊಂದಿಗೆ, ಭಾರತವು ಕಕ್ಷೆಗೆ ಉಪಗ್ರಹವನ್ನು ಕಳುಹಿಸಿದ ವಿಶ್ವದ ೧೧ ನೇ ರಾಷ್ಟ್ರವೆಂದು ಗುರುತಿಸಲ್ಪಟ್ಟಿತು.

<><><><>

ಬೆಂಗಳೂರಿನ ಜವಾಹರ ಲಾಲ್ ನೆಹರು ತಾರಾಲಯದಲ್ಲಿಂದು ಯು.ಆರ್. ರಾವ್ ಉಪಗ್ರಹ ಕೇಂದ್ರ ಮತ್ತು ಜವಾಹರ ಲಾಲ್ ನೆಹರು ತಾರಾಲಯ ಸಹಯೋಗದೊಂದಿಗೆ ಆರ್ಯಭಟ ಉಡಾವಣೆಯ ಸುವರ್ಣ ಮಹೋತ್ಸವ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾರತೀಯ ಖಭೌತ ಸಂಸ್ಥೆ ನಿರ್ದೇಶಕರಾದ ಡಾ. ಅನ್ನಪೂರ್ಣಿ ಸುಬ್ರಮಣಿಯಂ, ಯು.ಆರ್. ರಾವ್ ಉಪಗ್ರಹ ಕೇಂದ್ರದ ನಿರ್ದೇಶಕರಾದ ಎಂ. ಶಂಕರನ್, ಅಂತರಿಕ್ಷ ಆಯೋಗದ ಸದಸ್ಯರು, ಇಸ್ರೋ ಮಾಜಿ ಅಧ್ಯಕ್ಷರಾದ ಎ.ಎಸ್. ಕಿರಣ್ ಕುಮಾರ್, ತಾರಾಲಯದ ನಿರ್ದೇಶಕರಾದ ಡಾ. ವಿ.ಆರ್. ಗುರುಪ್ರಸಾದ್ ಮತ್ತಿತರರು ಪಾಲ್ಗೊಂಡಿದ್ದರು. ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ಮಾಜಿ ಇಸ್ರೋ ಅಧ್ಯಕ್ಷ ಎ.ಎಸ್. ಕಿರಣ್ ಕುಮಾರ್, ಭಾರತದ ಶ್ರೇಷ್ಠ ಭೌತಶಾಸ್ತ್ರಜ್ಞ ಮತ್ತು ಖಗೋಳಶಾಸ್ತ್ರಜ್ಞ ವಿಕ್ರಮ್ ಸಾರಾಭಾಯ್, ಭೌತಶಾಸ್ತ್ರಜ್ಞ ಹೋಮಿ. ಜೆ ಭಾಭಾ ರಂತಹ ಭಾರತ ಕಂಡ ದಾರ್ಶನಿಕ ಮಹಾತ್ಮರು ತಮ್ಮ ಅನನ್ಯ ದೃಷ್ಟಿಕೋನದೊಂದಿಗೆ ಭಾರತದ ಬಾಹ್ಯಾಕಾಶ ಕಾರ್ಯಕ್ರಮದ ರೂವಾರಿಗಳಾಗಿ ಕಾರ್ಯನಿರ್ವಹಿಸಿದ್ದರು. ಅವರಿಂದ ಸ್ಫೂರ್ತಿ ಪಡೆದು, ಇಂದಿನ ಯುವಜನರು ದೇಶ ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ಪರಿಹಾರಕ್ಕೆ ತಂತ್ರಜ್ಞಾನವನ್ನು ಹೇಗೆ ಬಳಸಿಕೊಳ್ಳಬಹುದು ಎಂಬುದರ ಕುರಿತು ಚಿಂತಿಸಬೇಕು ಎಂದು ಹೇಳಿದರು.

***ಧ್ವನಿ***ಎ.ಎಸ್. ಕಿರಣ್ ಕುಮಾರ್

ಉದ್ಘಾಟನಾ ಭಾಷಣದಲ್ಲಿ ಎಂ. ಶಂಕರನ್, ಭಾರತದ ಬಾಹ್ಯಾಕಾಶ ಪಯಣದಲ್ಲಿ ಆರ್ಯಭಟ ಉಪಗ್ರಹ ನಿರ್ವಹಿಸಿದ ಪಾತ್ರ ಕುರಿತು ಸಮಗ್ರ ಚಿತ್ರಣ ನೀಡಿದರು. ಇಲ್ಲಿಯವರೆಗೆ ಭಾರತ ೧೩೦ಕ್ಕೂ ಅಧಿಕ ಉಪಗ್ರಹಗಳ ಉಡವಾಣೆ ಮಾಡಿದ್ದು, ಇದರಲ್ಲಿ ಶೇಕಡ ೫೦ಕ್ಕಿಂತಲೂ ಹೆಚ್ಚು ಉಪಗ್ರಹಗಳು ಇನ್ನೂ ಕಾರ್ಯ ನಿರ್ವಹಿಸುತ್ತಿವೆ ಎಂದರು. ಇದೇ ವೇಳೆ ಮಾತನಾಡಿದ ಡಾ. ಅನ್ನಪೂರ್ಣಿ ಸುಬ್ರಮಣಿಯಮ್, ನಮ್ಮ ಪೂರ್ವಜರು, ವಿಜ್ಞಾನಿಗಳು ಬಿಟ್ಟು ಹೋಗಿರುವ ಪರಂಪರೆಯನ್ನು ಮುಂದುವರಿಸಿಕೊಂಡು ಹೋಗುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಸಾಧಿಸುವ ಛಲದೊಂದಿಗೆ ಆತ್ಮವಿಶ್ವಾಸ ಬೆಳೆಸಿಕೊಳ್ಳುವುದು ಯಾವುದೇ ಯೋಜನೆಯ ಯಶಸ್ಸಿಗೆ ಆಧಾರಸ್ತಂಭವಾಗಿದೆ ಎಂದು ಅವರು ಹೇಳಿದರು. ಕಾರ್ಯಕ್ರಮದಲ್ಲಿ ಆರ್ಯಭಟ ಉಪಗ್ರಹದ ಪಯಣದ ಕುರಿತ ಸಮಗ್ರ ಮಾಹಿತಿಯುಳ್ಳ ಸಾಕ್ಷ್ಯ ಚಿತ್ರವನ್ನು ಪ್ರದರ್ಶಿಸಲಾಯಿತು.

<><><><>

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ - ಎನ್‌ಟಿಎ ಇಂದು ಪ್ರಸಕ್ತ ವರ್ಷದ ಜಂಟಿ ಪ್ರವೇಶ ಪರೀಕ್ಷೆ - ಜೆಇಇ ಮುಖ್ಯ ಫಲಿತಾಂಶ - ೨ ಅನ್ನು ಪ್ರಕಟಿಸಿದೆ. ಈ ಭಾರಿ ಒಟ್ಟು ೨೪ ವಿದ್ಯಾರ್ಥಿಗಳು ಶೇಕಡ ನೂರಕ್ಕೆ ನೂರು ಅಂಕಗಳಿಸಿದ್ದಾರೆ. ಎನ್‌ಟಿಎ ಜೆಇಇ ಮುಖ್ಯ ಪರೀಕ್ಷೆಯ ಫಲಿತಾಂಶವನ್ನು ಕಟ್-ಆಫ್ ಸಮೇತವಾಗಿ ಪ್ರಕಟಿಸಿದ್ದು, ಫಲಿತಾಂಶ ಜಾಲತಾಣ **jeemain.nta.nic.in** ದಲ್ಲಿ ಲಭ್ಯವಿದೆ. ಜೆಇಇ ಮೇನ್‌ನ ಏಪ್ರಿಲ್ ಸೆಷನ್‌ಅನ್ನು ಇದೇ ತಿಂಗಳ ೨ ರಿಂದ ೯ರ ನಡುವೆ ಎನ್‌ಟಿಎ ನಡೆಸಿತ್ತು. ಸೆಷನ್-೨ರ ಪತ್ರಿಕೆ - ೧ ಕ್ಕೆ ೬ ಲಕ್ಷದ ೮೧ ಸಾವಿರದ ೮೭೧ ವಿದ್ಯಾರ್ಥಿನಿಯರು ಹಾಗೂ ೩ ಲಕ್ಷದ ೧೦ ಸಾವಿರದ ೪೭೯ ವಿದ್ಯಾರ್ಥಿಗಳು ಸೇರಿದಂತೆ ಒಟ್ಟು ೯ ಲಕ್ಷದ ೯೨ ಸಾವಿರದ ೩೫೦

ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಜೆಇಇ ಮೇನ್-೨೦೨೫ ಈ ವರ್ಷ ಜನವರಿ ಮತ್ತು ಏಪ್ರಿಲ್‌ನಲ್ಲಿ ಎರಡು ಸುತ್ತುಗಳಲ್ಲಿ ನಡೆಸಲಾಗಿದೆ. ಎರಡು ಬಾರಿ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿ ಎರಡರಲ್ಲಿ ಉತ್ತಮ ಅಂಕಗಳಿಸಿದ ಪರೀಕ್ಷೆಯನ್ನು ಅಂತಿಮ ಅರ್ಹತಾ ಪಟ್ಟಿಗೆ ಪರಿಗಣಿಸಲಾಗುವುದು ಎಂದು ಎನ್‌ಟಿಎ ತಿಳಿಸಿದೆ.

<><><><>

ಕಳೆದ ಹಣಕಾಸು ವರ್ಷದಲ್ಲಿ ಭಾರತದ ಔಷಧ ರಫ್ತು ೩೦ ಶತಕೋಟಿ ಡಾಲರ್‌ಗಳನ್ನು ಮೀರಿದೆ. ಒಟ್ಟು ಔಷಧ ರಫ್ತಿನ ಮೂರನೇ ಒಂದು ಭಾಗಕ್ಕಿಂತ ಹೆಚ್ಚಿನ ಪಾಲು ಹೊಂದಿರುವ ಅಮೆರಿಕ, ಭಾರತದ ಔಷಧ ರಫ್ತಿಗೆ ಪ್ರಮುಖ ಮಾರುಕಟ್ಟೆಯಾಗಿ ಮುಂದುವರಿದಿದೆ. ಅಧಿಕೃತ ವ್ಯಾಪಾರ ದತ್ತಾಂಶದ ಪ್ರಕಾರ, ಔಷಧ ರಫ್ತು ೨೦೨೪-೨೫ರ ಹಣಕಾಸು ವರ್ಷದಲ್ಲಿ ೩೦ ಶತಕೋಟಿ ಡಾಲರ್‌ಗಳಿಗಿಂತ ಹೆಚ್ಚು ತಲುಪಿದೆ. ಇದು ೨೦೨೩-೨೪ರ ಹಣಕಾಸು ವರ್ಷದಲ್ಲಿ ಸುಮಾರು ೨೭.೫ ಶತಕೋಟಿ ಡಾಲರ್‌ಗಳಿಗೆ ಹೋಲಿಸಿದರೆ ಶೇಕಡ ೯ ಕ್ಕಿಂತ ಹೆಚ್ಚು ಹೆಚ್ಚಳವಾಗಿದೆ.
ಮಾರ್ಚ್ ೨೦೨೫ ರಲ್ಲಿ, ಔಷಧ ರಫ್ತುಗಳು ವರ್ಷದಿಂದ ವರ್ಷಕ್ಕೆ ಶೇಕಡ ೩೦ ಕ್ಕಿಂತ ಹೆಚ್ಚು ಏರಿಕೆಯನ್ನು ದಾಖಲಿಸಿದ್ದು, ಹಿಂದಿನ ಹಣಕಾಸು ವರ್ಷದ ಇದೇ ತಿಂಗಳಿನ ೨ ಸಾವಿರದ ೮೦೬ ಮಿಲಿಯನ್ ಡಾಲರ್‌ಗಳಿಂದ ೩ ಸಾವಿರದ ೬೮೧ ಮಿಲಿಯನ್ ಡಾಲರ್‌ಗಳಿಗೆ ಏರಿಕೆಯಾಗಿದೆ.

<><><><>

ಯಕೃತ್ತಿನ ಕಾಯಿಲೆಗಳ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಜನರು ಎಣ್ಣೆಯುಕ್ತ ಮತ್ತು ಜಿಡ್ಡಿನ ಆಹಾರವನ್ನು ಕಡಿಮೆಗೊಳಿಸಿ, ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹಿಸಲು ಇಂದು ವಿಶ್ವ ಯಕೃತ್ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ವಿಶ್ವ ಆರೋಗ್ಯ ಸಂಸ್ಥೆ ಪ್ರಕಾರ ಯಕೃತ್ತಿಕ ಕಾಯಿಲೆಗಳು ಭಾರತದಲ್ಲಿ ಸಾವಿಗೆ ಹತ್ತನೆಯ ಸಾಮಾನ್ಯ ಕಾರಣವಾಗಿದೆ. ವ್ಯಾಯಾಮದ ಕೊರತೆ, ಅಪೌಷ್ಠಿಕ ಆಹಾರಗಳ ಸೇವನೆ ಕೂಡ ಇದಕ್ಕೆ ಮೂಲ ಕಾರಣವಾಗಿದೆ. ಈ ದಿನದ ಸ್ಮರಣಾರ್ಥವಾಗಿ ಯಕೃತ್ತ ಮತ್ತು ಪಿತ್ತರಸ ವಿಜ್ಞಾನ ಸಂಸ್ಥೆಯು ನವದೆಹಲಿಯಲ್ಲಿ 'ಆರೋಗ್ಯಕರ ಯಕೃತ್ತು - ಆರೋಗ್ಯಕರ ಭಾರತ' ಕಾರ್ಯಕ್ರಮವನ್ನು ಆಯೋಜಿಸಿದೆ. ಈ ವರ್ಷದ ವಿಶ್ವ ಯಕೃತ್ ದಿನದ ವಿಷಯ 'ಆಹಾರವೇ ಔಷಧ' ಎಂಬುದಾಗಿದೆ. ಆಹಾರದ ಆಯ್ಕೆ ಮತ್ತು ಸಮತೋಲಿತ ಆಹಾರದ ಮೂಲಕ ಯಕೃತ್ತಿನ ಕಾಯಿಲೆಗಳನ್ನು ತಡೆಗಟ್ಟುವಿಕೆಯಲ್ಲಿ ಮಹತ್ವದ ಪಾತ್ರವನ್ನು ವಹಿಸುತ್ತವೆ.

<><><><>

ಗೃಹ ಸಚಿವಾಲಯದ ಅಡಿಯಲ್ಲಿರುವ ಭಾರತೀಯ ಸೈಬರ್ ಅಪರಾಧ ಸಮನ್ವಯ ಕೇಂದ್ರ ೧೪ ಸಿ ಇಂದು ಆನ್‌ಲೈನ್ ಬುಕಿಂಗ್ ವಂಚನೆಗಳ ಬಗ್ಗೆ, ವಿಶೇಷವಾಗಿ ದೇಶಾದ್ಯಂತ ಧಾರ್ಮಿಕ ಯಾತ್ರಿಕರು ಮತ್ತು ಪ್ರವಾಸಿಗರನ್ನು ಗುರಿಯಾಗಿಸಿಕೊಂಡು ನಡೆಯುವ ವಂಚನೆಗಳ ಬಗ್ಗೆ ಸಾರ್ವಜನಿಕ ಎಚ್ಚರಿಕೆಯನ್ನು ನೀಡಿದೆ.

<><><><>

ಸೌದಿ ಅರೆಬಿಯಾದ ದಮ್ಮಾರ್‌ನಲ್ಲಿ ನಡೆದ ೧೮ ವರ್ಷದೊಳಗಿನವರ ಏಷ್ಯನ್ ಏಷ್ಯಾನ್ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್‌ನಲ್ಲಿ ಪುರುಷರ ಜಾವೆಲಿನ್ ಎಸೆತ ಸ್ಪರ್ಧೆಯಲ್ಲಿ ಭಾರತದ ಹಿಮಾಂಶು ಜಾಕರ್ ಚಿನ್ನ ಗೆದ್ದಿದ್ದಾರೆ. ಆ ಮೂಲಕ ಈ ಟೂರ್ನಿಯಲ್ಲಿ ಚಿನ್ನ ಗೆದ್ದ ಮೊದಲ ಭಾರತೀಯ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಅವರ ೬೭.೫೭ ಮೀಟರ್ ದೂರದ ಎಸೆತ ಅವರಿಗೆ ಅಗ್ರಸ್ಥಾನವನ್ನು ಭದ್ರಪಡಿಸಿತು. ಪುರುಷರ ಹೈಜಂಪ್ ಸ್ಪರ್ಧೆಯಲ್ಲಿ ದೇವಕ್

ಭೂಷಣ್ - ಬೆಳ್ಳಿ, ಮಹಿಳೆಯರ ೨೦೦ ಮೀಟರ್ ಓಟದ ಸ್ಪರ್ಧೆಯಲ್ಲಿ ಆರ್ತಿ - ಕಂಚಿನ ಪದಕ ತಮ್ಮದಾಗಿಸಿಕೊಂಡರು. ಪುರುಷರ ಮೆಡ್ಲೆ ರಿಲೆ ಓಟ ಸ್ಪರ್ಧೆಯಲ್ಲಿ ಚಿರಂತ್ ಪಿ., ಸೈಯದ್ ಸಮೀರ್, ಸಾಕೇತ್ ಮಿಂಜ್, ಕಾದಿರ್ ಖಾನ್ ಅವರನ್ನೊಳಗೊಂಡ ಭಾರತೀಯ ತಂಡ ಬೆಳ್ಳಿ ಪದಕ ತಮ್ಮದಾಗಿಸಿಕೊಂಡಿದೆ. ಭಾರತ ಕ್ರೀಡಾಕೂಟದಲ್ಲಿ ಒಂದು ಚಿನ್ನ, ೫ ಬೆಳ್ಳಿ, ೫ ಕಂಚಿನ ಪದಕಗಳೊಂದಿಗೆ ಒಟ್ಟು ೧೧ ಪದಕಗಳನ್ನು ಗಳಿಸಿದೆ.

<><><><>

ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿಂದು ಎರಡು ಪಂದ್ಯಗಳು ನಡೆಯಲಿದ್ದು, ಅಹಮದಾಬಾದ್‌ನಲ್ಲಿ ನಡೆಯಲಿರುವ ಮೊದಲ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ತಂಡವು ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೩.೩೦ಕ್ಕೆ ಆರಂಭವಾಗಲಿದೆ. ಜೈಪುರನಲ್ಲಿ ನಡೆಯಲಿರುವ ದಿನದ ಎರಡನೇ ಪಂದ್ಯದಲ್ಲಿ ರಾಜಸ್ಥಾನ ರಾಯಲ್ಸ್ ಹಾಗೂ ಲಕ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>